ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಅಭಿಯಂತರವರ ಕಛೇರಿ, ರಾಜರಾಜೇಶ್ವರಿನಗರ ವಲಯ, ಬೆಂಗಳೂರು-98

ಸಂಖ್ಯೆ:ಮುಅ/ರಾ.ರಾ.ನ/ತಾ.ಮಂ/ 63 /2022-23 ದಿನಾಂಕ: 08.07.2022

"ತಾಂತ್ರಿಕ ಮಂಜೂರಾತಿ ಪತ್ರ"

ವಿಷಯ :- **Comprehensive Development of Roads & Drains in Subhash Play Ground, Sachidananda Nagar, Baldwin School, Crazy Park, BEML layout, Dwaraka West, Dwaraka East and Surrounding areas in Ward No.160 under PACKAGE (09)- 2022-23 RRN-DIV.** ರ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ :- ಕಾರ್ಯಪಾಲಕ ಅಭಿಯಂತರರು (ರಾರಾನಗರ) ರವರ ಟಿಪ್ಪಣಿ ದಿನಾಂಕ ಪರಿಯಲ್ಲಿ ಆಡಳಿತಾತ್ಮಕ ಮಂಜೂರಾತಿ ನಿರೀಕ್ಷಿಸಿ ತಾಂತ್ರಿಕ ಮಂಜೂರಾತಿಯನ್ನು ನೀಡಲು ಕೋರಿರುವ ಪ್ರಸ್ತಾವನೆ ದಿನಾಂಕ ಪರಿ.

ಪ್ರಸ್ತಾವನೆ:-

ಕಾರ್ಯಪಾಲಕ ಅಭಿಯಂತರರು(ರಾರಾನಗರ) ವಿಭಾಗ ರವರು ಮೇಲ್ಕಂಡ ಕಾಮಗಾರಿಯ ಅಂದಾಜು ಪಟ್ಟಿಯನ್ನು **ರೂ.1350.00ಲಕ್ಷಗಳ** ಮೊತ್ತಕ್ಕೆ ತಯಾರಿಸಿ, ಉಲ್ಲೇಖ(1)ರಂತೆ ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ, ತಾಂತ್ರಿಕ ಮಂಜೂರಾತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಕಾರ್ಯಪಾಲಕ ಅಭಿಯಂತರರು(ರಾರಾನಗರ) ವಿಭಾಗ ರವರ ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

"Comprehensive Development of Roads & Drains in Subhash Play Ground Sachidananda Nagar, Baldwin School, Crazy Park, BEML layout, Dwaraka West Dwaraka East and Surrounding areas in Ward No.160 under PACKAGE (09)- 2022-2 RRN-DIV." ರ ಕಾಮಗಾರಿಯ ಅಂದಾಜು ಮೊತ್ತ **ರೂ.1350.00** ಲಕ್ಷಗಳ ಮೊತ್ತಕ್ಕೆ ಮಾನ್ಯ ಮುಖ್ಯ ಮಂತ್ರಿಗಳ "ಅಮೃ ನಗರೋತ್ಥಾನ" ಯೋಜನೆಯಡಿ ಮೀಸಲಿಟ್ಟಿರುವ ಅನುದಾನದಡಿಯಲ್ಲಿ ಕಾಮಗಾರಿಗೆ ಜಾಬ್‌ಸಂಖ್ಯೆ ನಿರೀಕ್ಷಿಸಿ ಸದ ಅಂದಾಜು ಪಟ್ಟಿಗೆ ಈ ಕಛೇರಿಯ ತಾಂತ್ರಿಕ ಮಂಜೂರಾತಿ ದಾಖಲಾತಿಯ ವಹಿಯ **ಕ್ರಮ ಸಂಖ್ಯೆ : 63** ಮತ್ತು **ಪುಟ ಸಂಖ್ಯೆ 20-21** ರಲ್ಲಿ ನೊಂದಾಯಿಸಿ **ರೂ.11,21,15,572/-(ರೂ.ಹನ್ನೊಂದು ಕೋಟಿ ಇಪ್ಪತ್ತೊಂದು ಲಕ್ಷದ ಹದಿನೈದು ಸಾವಿರ ಐದು ನೂರ ಎಪ್ಪತ್ತೆರಡು ಮಾತ್ರ) ಗಳಿಗೆ ಲಕ್ಷಗಳಿಗೆ** ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ.

ಷರತ್ತುಗಳು :-

1. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮ 2000 ಪ್ರಕಾರ ಕಾಮಗಾರಿಯ ಟೆಂಡರ್ ಕರೆಯುವಲ್ಲಿ ಸೂಕ್ತ ಕ್ರಮ ಅನುಸರಿಸತಕ್ಕದ್ದು.
2. ಅಂದಾಜುಪಟ್ಟಿಯ ಮೊತ್ತವು ಮಂಜೂರಾತಿಯಾದ ಮೊತ್ತಕ್ಕಿಂತ ಮೀರಬಾರದು, ಹಾಗೂ ಕಾಮಗಾರಿ ಮಂಜೂರಾದ ಮೊತ್ತದ ಹಣವನ್ನು ಅದೇ ಕಾಮಗಾರಿಗೆ ಉಪಯೋಗಿಸತಕ್ಕದ್ದು.
3. ಕಾಮಗಾರಿಯನ್ನು ಐ.ಆರ್.ಸಿ/ಐ.ಎಸ್. ಮಾರ್ಗ ಸೂಚಿಗಳಂತೆ, ಮತ್ತು ನಿಗಧಿತ ವಿಶಿಷ್ಟ ವಿವರಣೆಯ (Standard Specification) ಪ್ರಕಾರ ನಿರ್ವಹಿಸತಕ್ಕದ್ದು.
4. ಕಾಮಗಾರಿ ಪೂರ್ಣಗೊಂಡ ನಂತರ ನಿಗಧಿತ ಅವಧಿಯೊಳಗೆ ಯುಟಿಲೈಜೇಷನ್ ಪ್ರಮಾಣ ಪತ್ರ ಹಾಗ ಕಾಮಗಾರಿ ಪೂರ್ಣಗೊಂಡ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

ಪು.ತಿ.ನೋ.

Scanned with OKEN Scanner

5. ಮಂಜೂರಾದ ಕಾಮಗಾರಿಯಲ್ಲಿ ಯಾವುದೇ ಬದಲಾವಣೆ ಅಥವಾ ಮಾರ್ಪಾಡು ಅಗಿದ್ದಲ್ಲಿ ಅಧಿಕಾರಿಗಳೇ ಜವಾಬ್ದಾರರಾಗಿರುತ್ತಾರೆ ನಿಗದಿಯಾದ ದರಪಟ್ಟಿಯಲ್ಲಿಲ್ಲದ ದರಗಳಿಗೆ (Data Rate) ದರಗಳ ವಿವರಗಳಿಗೆ (Rate Analysis) ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯು ತಕ್ಕದ್ದು.
6. ಪ್ರಸುತ್ತ ಉದ್ದೇಶಿಸಿರುವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದಕ್ಕೆ ಪೂರಕವಾಗಿ ಈ ಹಿಂದೆ ಕಾಮಗಾರಿಗಳ ನಿರ್ವಹಣೆ ಅಂಶಗಳ ವಿವರಗಳನ್ನು ರಸ್ತೆ ಇತಿಹಾಸ (Road History)
7. ಅಂದಾಜು ಪಟ್ಟಿಯಲ್ಲಿ ಅಳವಡಿಸಿರುವ ಇಡಗಂಟು ರೂಪದಲ್ಲಿ ಒದಗಿಸಲಾಗಿರುವ (Lumpsum Provisions) ಮೊತ್ತಗಳಿಗೆ ಉಪಅಂದಾಜನ್ನು ತಯಾರಿಸಿ ಅನುಮೋದನೆ ಪಡೆಯ ತಕ್ಕದ್ದು.
8. ಸದರಿ ಕಾಮಗಾರಿಗೆ ಟೆಂಡರ್ ಆಹ್ವಾನಿಸುವಾಗ Stander Tender Document KW - 1/2/3/4 ಹಾಗೂ ಅಗಿಂದಾಗ್ಗೆ ಹೊರಡಿಸುವ ತಿದ್ದುಪಡಿಗಳನ್ನು ಅಳವಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.
9. ತೆರವುಗೊಳಿಸಿರುವ ಉಪಯುಕ್ತ ಸಾಮಾಗ್ರಿಗಳ ಬಗ್ಗೆ MAS ನ ವಹಿಯಲ್ಲಿ ದಾಖಲಿಸುವುದು ಹಾಗೂ ಈ ತರಹದ ಉಪಯುಕ್ತ ಸಾಮಾಗ್ರಿಗಳನ್ನು ಬೇರೆಡೆ ಉಪಯೋಗಿಸಿರುವ (ಮರು ಬಳಿಕೆ ಮಾಡಿರುವ) ಬಗ್ಗೆ ಪ್ರತ್ಯೇಕ ವಹಿಯಲ್ಲಿ ದಾಖಲಿಸಿ ದೃಢೀಕರಿಸಿಕೊಳ್ಳುವುದು.

ಮುಖ್ಯ ಅಭಿಯಂತರರು
ರಾಜರಾಜೇಶ್ವರಿನಗರವಲಯ
ಬೃಹತ್ ಬೆಂಗಳೂರು ಮಹಾನಗರಪಾಲಿಕೆ

ಪ್ರತಿಯನ್ನು:-
1. ಕಾರ್ಯಪಾಲಕ ಅಭಿಯಂತರರು(ರಾರಾನಗರ) ವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಯವರ ಗಮನಕ್ಕೆ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned with OKEN Scanner